ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಯೋಜನೆಗಳ ಬಗ್ಗೆ

ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

126 (146) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಯೋಜನೆಗಳಾವುವು ; ಕಳೆದ 02 ವರ್ಷಗಳಲ್ಲಿ ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಜಲಪ್ರಳಯದಲ್ಲಿ ಎಷ್ಟು ಎಕರೆ ಪ್ರದೇಶದ ಬೆಳೆ ನಷ್ಟವಾಗಿದೆ; ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; ಜಲ ಪ್ರಳಯದ ಸಂಬಂಧ ಭೂ ಕುಸಿತಗೊಂಡ ಪ್ರದೇಶದಲ್ಲಿ ಮತ್ತೆ ತೋಟಗಾರಿಕೆ ಕೈಗೊಳ್ಳಲು ಸರ್ಕಾರ ಯಾವ ಯಾವ ಯೋಜನೆಯನ್ನು ರೂಪಿಸಿದೆ ; (ಪೂರ್ಣ ವಿವರ ನೀಡುವುದು)

(ಇ) ಜಲಪ್ರಳಯದಲ್ಲಿ ಉಂಟಾದ ನಷ್ಟವೆಷ್ಟು ; ಸರ್ಕಾರ ಬಿಡುಗಡೆಗೊಳಿಸಿದ ಮೊತ್ತವೆಷ್ಟು; ಉಳಿಕೆ ಮೊತ್ತವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು ? (ಪೂರ್ಣ ವಿವರ ಒದಗಿಸುವುದು)